# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 122 ಟಿಇಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 29-03-2021.

ಇವರಿಂದ:-

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು-560001.

ಇವರಿಗೆ:-

ಕುಲಸಚಿವರು,
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,
ಜ್ಞಾನಸಂಗಮ, ಬೆಳಗಾವಿ.

ಮಾನ್ಯರೇ,

**ವಿಷಯ:** ಆರ್.ವಿ.ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು ಈ ಕಾಲೇಜಿನಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ B.E. in Computer Science and engineering ಕೋರ್ಸಿನಲ್ಲಿ ವಿದ್ಯಾರ್ಥಿ ಪ್ರಮಾಣವನ್ನು 60 ರಿಂದ 120ಕ್ಕೆ ಹೆಚ್ಚಿಸಲು ಸಂಯೋಜನೆ ನೀಡುವ ಬಗ್ಗೆ.

**ಉಲ್ಲೇಖ:**
1. ಪ್ರಾಂಶುಪಾಲರು, ಆರ್.ವಿ.ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಜೆ.ಪಿ. ನಗರ, ಬೆಂಗಳೂರು ರವರ ಪತ್ರ ಸಂಖ್ಯೆ: RVITM/422/2020-21 ದಿನಾಂಕ: 22.06.2020.
2. ತಮ್ಮ ಪತ್ರ ಸಂಖ್ಯೆ: ವಿತಾವಿ/ಶೈಕ್ಷಣಿಕ/2020-2021/ಎ-6/5930, ದಿನಾಂಕ: 09.02.2021.

*******

ಆರ್.ವಿ.ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು ಈ ಕಾಲೇಜಿನಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ B.E. in Computer Science and engineering ಕೋರ್ಸಿನಲ್ಲಿ ವಿದ್ಯಾರ್ಥಿ ಪ್ರಮಾಣವನ್ನು 60 ರಿಂದ 120ಕ್ಕೆ ಹೆಚ್ಚಿಸಲು ಸಂಯೋಜನೆ ಕೋರಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ಸ್ಥಳೀಯ ವಿಚಾರಣಾ ಸಮಿತಿಯ, ಅಕಾಡೆಮಿಕ್ ಸೆನೆಟ್ ಮತ್ತು ಕಾರ್ಯಕಾರಿ ಮಂಡಳಿ ಶಿಫಾರಸ್ಸು ಹಾಗೂ ಎಐಸಿಟಿಇಯ ಅನುಮೋದನೆಯ ಹಿನ್ನೆಲೆಯಲ್ಲಿ ಸಂವೀಕ್ಷಿಸಲಾಗಿದೆ.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಧಿನಿಯಮ 1994ರ ಪ್ರಕರಣ 40(6)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಆರ್.ವಿ.ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು ಈ ಕಾಲೇಜಿನಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ B.E. in Computer Science and engineering ಕೋರ್ಸಿನಲ್ಲಿ ವಿದ್ಯಾರ್ಥಿ ಪ್ರಮಾಣವನ್ನು 60 ರಿಂದ 120ಕ್ಕೆ

GOK file)

ಹೆಚ್ಚಿಸಲು ಸಂಯೋಜನೆಯನ್ನು ಮಂಜೂರು ಮಾಡುವಂತೆ ಶಿಫಾರಸ್ಸು ಮಾಡಲು ನಾನು ನಿರ್ದೇಶಿತನಾಗಿದ್ದೇನೆ.

| ಕ್ರ.ಸಂ | ಕೋರ್ಸ್ | ವಿದ್ಯಾರ್ಥಿ ಪ್ರಮಾಣ ಹೆಚ್ಚಳ | ಶೈಕ್ಷಣಿಕ ವರ್ಷ |
|---|---|---|---|
| 01 | B.E. in Computer Science and engineering | 60 to 120 | 2020-21 |

ಮೇಲ್ಕಂಡ ಸಂಯೋಜನೆಯು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.

**ಷರತ್ತುಗಳು:-**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸುಗಳೆಂದು ಪರಿಗಣಿಸತಕ್ಕದ್ದು;
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5. ಸ್ಥಳೀಯ ವಿಚಾರಣಾ ಸಮಿತಿ, ಕೌನ್ಸಿಲ್ ಆಫ್ ಆರ್ಕಿಟೆಕ್ಚರ್ ರವರು ವಿಧಿಸಿರುವ ಪ್ರತಿಯೊಂದು ಷರತ್ತಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7. ದಿನಾಂಕ:13.08.1997 ರಂದು ವಿಶಾಖ ವಿರುದ್ಧ ರಾಜಸ್ತಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನನಾನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯ ಮೇಲೆ ಲೈಂಗಿಕ ಕಿರುಕುಳ ನೀಡಿದ್ದಲ್ಲಿ ಅದು ಸಂಜ್ಞೆಯ ಅಪರಾಧ (Cognizable offense) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು,

ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವರೆಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
11. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
12. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
13. ಇನ್ನು ಮುಂದೆ ಯಾವುದೇ ಹೊಸ ಕೋರ್ಸನ್ನು ಪ್ರಾರಂಭಿಸಿದ್ದಲ್ಲಿ, ಇಲ್ಲವೇ ವಿದ್ಯಾರ್ಥಿ ಪ್ರಮಾಣವನ್ನು ಹೆಚ್ಚಿಸಿಕೊಂಡಲ್ಲಿ, ಆಯಾ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರದಿಂದ ಸಂಯೋಜನೆ ಆದೇಶವನ್ನು ಪಡೆಯತಕ್ಕದ್ದು

ತಮ್ಮ ನಂಬುಗೆಯ

29/03/2021

(ಎಂ.ಜಿ.ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

29/3/21

ಪ್ರತಿ:

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2. ಪ್ರಾಂಶುಪಾಲರು, ಆರ್.ವಿ.ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಕೊತ್ತನೂರು, ಜೆ.ಪಿ. ನಗರ, ಬೆಂಗಳೂರು.